(c) give directions for acquisition of records from private custody;

(d) deal with such other matters as may be prescribed.

15. Power of the Director to lay down norms and standards for courses in archival science.- The Director shall have the power to lay down norms, and standards for courses, curricula, assessment and examinations relating to the training in archival science and other ancillary subjects.

16. Protection of action taken in good faith.- No suit, prosecution or other legal proceedings shall lie against any person in respect of anything which is in good faith done or intended to be done in pursuance of this Act or the rules made there under.

17. Power to make rules.- (1) The State Government may, by notification in the Official Gazette, make rules to carry out the purposes of this Act.

(2) In particular and without prejudice to the generality of the foregoing power, such rules may provide for all or any of the following matters, namely:-

(a) the period after which public records of permanent nature may be accepted under clause (b) of sub-section (2) of section 3;

(b) the manner in which and the conditions subject to which public records can be destroyed under clause (d) of sub-section (1) of section 6;

(c) the manner in which periodical review of classified public records for downgrading shall be undertaken under clause (f) of sub-section (1) of section 6;

(d) the manner in which the records officer will report to the Director under clause (k) of sub-section (1) of section 6;

(e) the manner in which and the conditions subject to which public records may be destroyed or disposed of under sub-section (1) of section 8;

(f) the manner in which and the conditions subject to which records of historical or national or State importance may be made available to research scholar under sub-section (2) of section 11;

(g) exceptions and restrictions subject to which public records may be made available to a research scholar under sub-section (1) of section 12;

(h) the allowances payable to members of the Board under sub-section (3) of section 13;

(i) the matters with respect to which the Board may perform its functions under clause (d) of section 14;

(j) any other matter which is required to be, or may be, prescribed.

(3) Every rule made under this Act shall be laid, as soon as may be after it is made, before each House of State Legislature while it is in session, for a total period of thirty days which may be comprised in one session or in two or more successive sessions, and if, before the expiry of the session immediately following the session or the successive sessions aforesaid, both Houses agree in making any modification in the rule or both Houses agree that the rule should not be made, the rule shall thereafter have effect only in such modified form or be of no effect, as the case may be; so, however, that any such modification or annulment shall be without prejudice to the validity of anything previously done under that rule.

18. Power to remove difficulty.- (1) If any difficulty arises in giving effect to the provisions of this Act, the State Government may, by order published in the official Gazette, make such provisions, not inconsistent with the provisions of this Act, as appear to it to be necessary or expedient for removing the difficulty:

Provided that, no such order shall be made after the expiry of a period of two years from the date of commencement of this Act.

(2) Every order made under sub-section (1) shall be laid, as soon as may be, after it is made, before each House of the State Legislature.

The above translation of ಕರ್ನಾಟಕ ರಾಜ್ಯ ಸಾರ್ವಜನಿಕ ದಾಖಲೆಗಳ ಅಧಿನಿಯಮ, 2010 (2011ರ ಕರ್ನಾಟಕ ಅಧಿನಿಯಮ ಸಂಖ್ಯೆ 9) be published in the official Gazette under clause (3) of Article 348 of the Constitution of India.

H.R.BHARDWAJ
GOVERNOR OF KARNATAKA

By Order and in the name of the Governor of Karnataka
G.K. BOREGOWDA
Secretary to Government,
Department of Parliamentary Affairs & Legislation

ವಿಶೇಷ ಪತ್ರಿಕೆ

ಭಾಗ – **IV-A**	ಬೆಂಗಳೂರು, ಮಂಗಳವಾರ, ಏಪ್ರಿಲ್ ೧೨, ೨೦೧೧ (ಚೈತ್ರ ೨೨, ಶಕ ವರ್ಷ ೧೯೩೩)	ನಂ. ೪೧೬

PARLIAMENTARY AFFAIRS & LEGISLATION SECRETARIAT

NOTIFICATION

NO. SAMVYASHAE 24 SHASANA 2010, Bangalore, Dated: 12.04.2011

Ordered that the translation of the ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2011 (2011ರ ಕರ್ನಾಟಕ ಅಧಿನಿಯಮ ಸಂಖ್ಯೆ: 10) in the English language, be published as authorised by the Governor of Karnataka under clause (3) of Article 348 of the constitution of India in the Karnataka Gazette for general information.

The following translation of the ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2011 (2011ರ ಕರ್ನಾಟಕ ಅಧಿನಿಯಮ ಸಂಖ್ಯೆ: 10) in the English language is published in the Official Gazette under the authority of the Governor of Karnataka under clause (3) of Article 348 of the Constitution of India.

KARNATAKA ACT NO. 10 OF 2011

(First Published in the Karnataka Gazette Extra-ordinary on the ninth day of February 2011)

THE HAMPI WORLD HERITAGE AREA MANAGEMENT AUTHORITY (AMENDMENT) ACT, 2011

(Received the assent of the Governor on the fourth day of February, 2011)

An Act to amend the Hampi World Heritage Area Management Authority Act, 2002.

Whereas, it is expedient to amend the Hampi World Heritage Area Management Authority Act, 2002 (Karnataka Act 18 of 2003) for the purposes hereinafter appearing;

Be it enacted by the Karnataka State Legislature in the sixty first year of the Republic of India as follows:-

1. Short title and commencement.- (1) This Act may be called the Hampi World Heritage Area Management Authority (Amendment) Act, 2011.

(2) It shall come into force at once.

2. Amendment of section 2.- In the Hampi World Heritage Area Management Authority Act, 2002 (Karnataka Act 18 of 2003) (hereinafter referred to as the principal Act), in section 2,-

(a) clause (a) shall be omitted;

(b) after clause (q), the following shall be inserted, namely:-

"(r) 'State Level Committee' means the committee constituted under section 6;"

3. Amendment of section 6.- (i) in the heading to section 6 of the principal Act, for the words "State Level Advisory Committee", the words "State Level Committee" shall be substituted;

(ii) in section 6 of the principal Act, in sub-section (1),-

(a) for the words "State Level Advisory Committee", the words "State Level Committee" shall be substituted;

(b) for clauses (a) and (b), the following shall be substituted, namely:-

"(a)	The Chief Minister	-	Chairperson
(aa)	The Minister in charge of Bellary District	-	Vice Chairperson
(b)	The Minister in charge of Kannada and Culture	-	Member"

(iii) in sub-sections (2), (3), (4) and (5), for the words "Advisory Committee" wherever they occur, the words "State Level Committee" shall be substituted.

The above translation of ಕರ್ನಾಟಕ ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2011 (2011ರ ಕರ್ನಾಟಕ ಅಧಿನಿಯಮ ಸಂಖ್ಯೆ 10) be published in the official Gazette under clause (3) of Article 348 of the Constitution of India.

H.R.BHARDWAJ
GOVERNOR OF KARNATAKA

By Order and in the name of the Governor of Karnataka

G.K. BOREGOWDA
Secretary to Government
Department of Parliamentary Affairs & Legislation

ವಿಶೇಷ ಪತ್ರಿಕೆ

ಭಾಗ – V	ಬೆಂಗಳೂರು, ಬುಧವಾರ, ಏಪ್ರಿಲ್ ೧೩, ೨೦೧೧ (ಚೈತ್ರ ೨೩, ಶಕ ವರ್ಷ ೧೯೩೩)	ನಂ. ೪೧೭

ಒಳಾಡಳಿತ ಸಚಿವಾಲಯ

ಪೊಲೀಸ್ ಇಲಾಖೆ

APC-POLCET-2011

(ISO: 9001-2008 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)

ಅಧಿಸೂಚನೆ

ಸಂಖ್ಯೆ. 33/ನೇಮಕಾತಿ/2011, ಬೆಂಗಳೂರು, ದಿನಾಂಕ: 13.04.2011

ವಿಷಯ: ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಅಶ್ವಾರೋಹಿದಳ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಕೆ.ಎ.ಆರ್.ಪಿ. ಮೌಂಟೆಡ್ ಕಂಪನಿ, ಮೈಸೂರು) ಹುದ್ದೆಗಳಿಗೆ ನೇಮಕಾತಿ ಕುರಿತು.

~ ~ ~ ~

ಕರ್ನಾಟಕ ರಾಜ್ಯದ, ಪೊಲೀಸ್ ಇಲಾಖೆಯಲ್ಲಿ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಅಶ್ವಾರೋಹಿದಳ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ನೌಕರರ ಸೇವೆಗಳು ಸೇರಿದಂತೆ (ನೇಮಕಾತಿ) ನಿಯಮ 2004 ಮತ್ತು ಅಧಿಸೂಚನೆ

ಸಂಖ್ಯೆ.ಹೆಚ್‌ಡಿ/282/ಪೊಸಿಅ/2008, ದಿನಾಂಕ: 28.05.2009 ರಲ್ಲಿ ಪ್ರಕಟಿಸಿದ ತಿದ್ದುಪಡಿ ನಿಯಮಗಳು 2009, ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977 ಹಾಗೂ ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಅರ್ಹ ಪುರುಷ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. **ಅರ್ಜಿ ಪಡೆಯುವ ಮತ್ತು ಸಲ್ಲಿಸುವ ವಿಧಾನ :** ಅಭ್ಯರ್ಥಿಗಳು ರಾಜ್ಯದಲ್ಲಿ ಯಾವ ಜಿಲ್ಲೆ ಅಥವಾ ಕಮೀಷನರೇಟ್‌ಗಳಲ್ಲಿ ಸೇವೆ ಸಲ್ಲಿಸಲು ಇಚ್ಚಿಸುವರೋ ಅಂತಹ ಜಿಲ್ಲೆ ಮತ್ತು ನಗರಗಳನ್ನೊಳಗೊಂಡಂತೆ ಪೊಲೀಸ್ ಸೂಪರಿಂಟೆಂಡೆಂಟ್/ ಪೊಲೀಸ್ ಕಮೀಷನರ್ ರವರ ಕಛೇರಿಗಳಲ್ಲಿ ಅರ್ಜಿಗಳನ್ನು ಮಾರಾಟ ಮಾಡುವುದಲ್ಲದೇ ಆನ್–ಲೈನ್ (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರವೂ ಸಹ ಸಲ್ಲಿಸಬಹುದು.

ಎ) ಶುಲ್ಕ:

ಅಭ್ಯರ್ಥಿಗಳು ಈ ಕೆಳಕಂಡ ವರ್ಗಗಳಿಗೆ ಸೇರಿದವರಾಗಿದ್ದರೆ, ಅದರ ಮುಂದೆ ನಮೂದಿಸಿರುವ ಪರೀಕ್ಷಾ ಶುಲ್ಕವನ್ನು ಪಾವತಿಸುವುದು	**ಆನ್‌ಲೈನ್**	**ಖುದ್ದಾಗಿ**
ಪ.ಜಾ, ಪ.ಪಂ, ಪ್ರವರ್ಗ–1	ರೂ.100/–	ರೂ.150/–
ಇತರೆ	ರೂ.250/–	ರೂ.300/–

ಟಿಪ್ಪಣಿ: ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ನಮೂದಿಸಿದಂತೆ ಅಭ್ಯರ್ಥಿಗೆ ಅನ್ವಯಿಸುವ ಒಟ್ಟು ಪರೀಕ್ಷಾ ಶುಲ್ಕವನ್ನು **ನಗದು ರೂಪದಲ್ಲಿ ಮಾತ್ರ** ಪಾವತಿಸತಕ್ಕದ್ದು. (ಪಾವತಿಸುವ ವಿವರಗಳನ್ನು ಈ ಕೆಳಗಿನ ಪ್ಯಾರಾದಲ್ಲಿ ಸೂಚಿಸಲಾಗಿದೆ). **ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

ಬಿ) **ಆನ್–ಲೈನ್ (On-line) ಮುಖಾಂತರ :**

ಅಭ್ಯರ್ಥಿಗಳು ಆನ್–ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಲು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ Police Recruitment ಮೇಲೆ ಕ್ಲಿಕ್ ಮಾಡಿದ ನಂತರ Fresh Application ಮೇಲೆ ಕ್ಲಿಕ್ ಮಾಡಿ ಅರ್ಜಿ ಭರ್ತಿ ಮಾಡುವುದು. ಆನ್–ಲೈನ್‌ನಲ್ಲಿ ಅರ್ಜಿಯ **ಮೊದಲ ಭಾಗ** ಭರ್ತಿ ಮಾಡಿದ ನಂತರ ಅಭ್ಯರ್ಥಿಯು ಅರ್ಜಿಯಲ್ಲಿ ಭರ್ತಿ ಮಾಡಿದ ಎಲ್ಲಾ ವಿವರಗಳು ಪರದೆಯ ಮೇಲೆ ಮೂಡುತ್ತವೆ. ಅಭ್ಯರ್ಥಿಯ ವಿವರಗಳು ಪರದೆ ಮೇಲೆ ಮೂಡಿದ ಕೂಡಲೇ ಎಲ್ಲಾ ವಿವರಗಳನ್ನು ಮತ್ತೊಮ್ಮೆ ಪರಿಶೀಲಿಸಿ, ಏನಾದರೂ ತಪ್ಪುಗಳಾಗಿದ್ದಲ್ಲಿ ಅದನ್ನು ಸರಿಪಡಿಸಲು edit ಮೇಲೆ ಕ್ಲಿಕ್ ಮಾಡಿ ನಂತರ ಅಗತ್ಯ ತಿದ್ದುಪಡಿಗಳನ್ನು ಮಾಡಬಹುದು. **ಅನಂತರ ಅರ್ಜಿಯಲ್ಲಿ ಭರ್ತಿ ಮಾಡಿರುವ ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಮನದಟ್ಟು ಮಾಡಿಕೊಂಡು ನಂತರ Proceed ಕ್ಲಿಕ್ ಮಾಡಿದಲ್ಲಿ ಶುಲ್ಕ** ಪಾವತಿಸಲು ಒಂದು ತ್ರಿಪ್ರತಿ (Triplicate) ಚಲನ್ ತಯಾರಾಗುತ್ತದೆ ಹಾಗೂ ಅರ್ಜಿ ಸಂಖ್ಯೆಯು ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿಯೇ ಬ್ಯಾಂಕ್ ಚಲನ್ ಮುಖಾಂತರ ಪಾವತಿಸಬೇಕಾಗಿರುತ್ತದೆ. ಪರೀಕ್ಷಾ ಶುಲ್ಕವನ್ನು SBM/SBH ನಲ್ಲಿ ಮಾತ್ರ ಪಾವತಿಸಬೇಕು (ವೆಬ್‌ಸೈಟ್‌ನಲ್ಲಿ ಅಂಗೀಕೃತ ಬ್ಯಾಂಕ್‌ಗಳ ಬಗ್ಗೆ ಮಾಹಿತಿ ನೀಡಲಾಗಿದೆ). ಬ್ಯಾಂಕ್‌ನಲ್ಲಿ ಹಣ ಪಾವತಿಸಿದ ನಂತರ ಬ್ಯಾಂಕ್‌ನವರು ಜರ್ನಲ್ ನಂಬರ್ ಹಾಗೂ ದಿನಾಂಕವನ್ನು ನೀಡುವರು. ಮತ್ತೊಮ್ಮೆ ಅದನ್ನು ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಹೋಗಿ Complete Application ನ್ನು ಕ್ಲಿಕ್ ಮಾಡಿದಲ್ಲಿ ಶುಲ್ಕ ಪಾವತಿಸಿದ ವಿವರಗಳನ್ನು ಭರ್ತಿ ಮಾಡಲು ಒಂದು Format ಕಂಪ್ಯೂಟರ್ ಪರದೆಯ ಮೇಲೆ ಮೂಡುತ್ತದೆ.

ಎರಡನೇ ಭಾಗದಲ್ಲಿ Journal number ಮತ್ತು ದಿನಾಂಕವನ್ನು ಪರದೆಯ ಮೇಲೆ ನಮೂದಿಸಬೇಕು. ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರವನ್ನು ಅಂಟಿಸಿ Scan ಮಾಡುವುದು ಹಾಗೂ ಸಹಿಯನ್ನು ಒಂದು ಬಿಳಿ ಹಾಳೆಯ ಮೇಲೆ ಮಾಡಿ ಅದನ್ನು ಪ್ರತ್ಯೇಕವಾಗಿ Scan ಮಾಡಿಟ್ಟುಕೊಂಡಿರಬೇಕು ಎರಡು ಸಹ (Photograph and Signature both should be less than 100 KB) Scan ಮಾಡಿಟ್ಟುಕೊಂಡಿರುವ ಭಾವಚಿತ್ರ ಮತ್ತು ಸಹಿಯನ್ನು ಕಂಪ್ಯೂಟರ್ ಮುಖೇನ ಭಾವಚಿತ್ರ ಮತ್ತು ಸಹಿಯ ಜಾಗದಲ್ಲಿ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅಭ್ಯರ್ಥಿಗಳು ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದು ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಅರ್ಜಿದಾರರು ಆನ್‌ಲೈನ್‌ನಲ್ಲಿ ಮುಂದುವರೆಯಲು ಸಾಧ್ಯವಾಗುತ್ತದೆ. ಭಾವಚಿತ್ರ ಮತ್ತು ಸಹಿ ಸರಿಯಾಗಿದೆಯೇ ಎಂದು ಪರೀಕ್ಷಿಸಿ ಏನಾದರೂ ತಪ್ಪಿದ್ದಲ್ಲಿ Edit Option ಮೂಲಕ ಸರಿಪಡಿಸತಕ್ಕದ್ದು ನಂತರ ಅಂತಿಮ ಅರ್ಜಿ ಪಡೆಯಲು Print Application ಬಟನ್ ಅನ್ನು ಒತ್ತಿ ಅರ್ಜಿಯ ಪ್ರತಿ ಪಡೆಯುವುದು. ಈ ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಈ ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

- ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 18.04.2011, ಬೆಳಿಗ್ಗೆ 10.00 ಗಂಟೆಗೆ
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 05.05.2011, ಮದ್ಯಾಹ್ನ 12.00 ಗಂಟೆಗೆ
- ಪರೀಕ್ಷಾ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 05.05.2011 ರಂದು ಎಲ್ಲಾ ಬ್ಯಾಂಕ್ ಕಛೇರಿ ವೇಳೆಯಲ್ಲಿ
- ಶುಲ್ಕ ಪಾವತಿಸಲಾದ Journal Number & Date ನಮೂದಿಸಲು ಕೊನೆಯ ದಿನಾಂಕ: 06.05.2011

ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸುವವರು ಬ್ಯಾಂಕ್‌ನ ಕಛೇರಿಯ ವೇಳೆಯಲ್ಲಿ ಮಾತ್ರ ಪಾವತಿಸತಕ್ಕದ್ದು.

ಸಿ) **<u>ಖುದ್ದಾಗಿ ಅರ್ಜಿ ಪಡೆದು ಸಲ್ಲಿಸುವ ಅಭ್ಯರ್ಥಿಗಳು:</u>**

ಅಭ್ಯರ್ಥಿಗಳು ಯಾವ ಜಿಲ್ಲೆ / ಕಮೀಷನರೇಟ್ ಮತ್ತು ಘಟಕಗಳಲ್ಲಿ ಸೇವೆ ಸಲ್ಲಿಸಲು ಇಚ್ಛಿಸುವರೋ ಅಂತಹ ಜಿಲ್ಲೆ / ಕಮೀಷನರೇಟ್ ಮತ್ತು ಘಟಕಗಳಲ್ಲಿ ಅರ್ಜಿ ಪಡೆದು ಭರ್ತಿ ಮಾಡಿ ಅಲ್ಲಿಯೇ ಖುದ್ದಾಗಿ ಸಲ್ಲಿಸುವುದು. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1 ರ ಅಭ್ಯರ್ಥಿಗಳು ಶುಲ್ಕ ರೂ.150/– ಹಾಗೂ ಇತರೆ ಪ್ರವರ್ಗಕ್ಕೆ ಸೇರಿದ ಎಲ್ಲಾ ಅಭ್ಯರ್ಥಿಗಳು ಶುಲ್ಕ ರೂ. 300/–ಗಳನ್ನು **ನಗದು ರೂಪದಲ್ಲಿ** ಪಾವತಿಸಿ **ದಿನಾಂಕ 18.04.2011 ರಿಂದ 05.05.2011 ರವರೆಗೆ ಬೆಳಿಗ್ಗೆ 10.00 ಗಂಟೆಯಿಂದ ಸಾಯಂಕಾಲ 5–00 ಗಂಟೆಯವರೆಗೆ** ಎಲ್ಲಾ ಕೆಲಸದ ದಿನಗಳಂದು (Working Days) ಅರ್ಜಿಯನ್ನು ಈ ಕೆಳಗೆ ನಮೂದಿಸಿರುವ ಪೊಲೀಸ್ ಸೂಪರಿಂಟೆಂಡೆಂಟ್ / ಕಮೀಷನರೇಟ್ ಮತ್ತು ಘಟಕ ಕಛೇರಿಗಳಲ್ಲಿ ಪಡೆದುಕೊಳ್ಳಬಹುದಾಗಿದೆ. ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು **ದಿನಾಂಕ 05.05.2011 ರಂದು ಸಾಯಂಕಾಲ 6.00 ಗಂಟೆಯೊಳಗೆ** ಅಥವಾ ಅದಕ್ಕಿಂತ ಮುಂಚಿತವಾಗಿ **ಅರ್ಜಿಯನ್ನು ಖರೀದಿಸಿದ ಕಛೇರಿಯಲ್ಲಿಯೇ** ಸಲ್ಲಿಸತಕ್ಕದ್ದು.

1.	ಬೆಂಗಳೂರು ನಗರ	8.	ಬೀದರ್ ಜಿಲ್ಲೆ
2.	ಮೈಸೂರು ನಗರ	9.	ಬಿಜಾಪೂರ ಜಿಲ್ಲೆ
3.	ಹುಬ್ಬಳ್ಳಿ–ಧಾರವಾಡ ನಗರ	10.	ಚಾಮರಾಜನಗರ ಜಿಲ್ಲೆ
4.	ಬಾಗಲಕೋಟೆ ಜಿಲ್ಲೆ	11.	ಚಿಕ್ಕಮಗಳೂರು ಜಿಲ್ಲೆ
5.	ಬೆಳಗಾವಿ ಜಿಲ್ಲೆ	12.	ಚಿತ್ರದುರ್ಗ ಜಿಲ್ಲೆ
6.	ಬಳ್ಳಾರಿ ಜಿಲ್ಲೆ	13.	ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು
7.	ಬೆಂಗಳೂರು ಜಿಲ್ಲೆ	14.	ದಾವಣಗೆರೆ ಜಿಲ್ಲೆ
15.	ಧಾರವಾಡ ಜಿಲ್ಲೆ	24.	ಮಂಡ್ಯ ಜಿಲ್ಲೆ
16.	ಗದಗ ಜಿಲ್ಲೆ	25.	ಮೈಸೂರು ಜಿಲ್ಲೆ
17.	ಗುಲ್ಬರ್ಗಾ ಜಿಲ್ಲೆ	26.	ರಾಯಚೂರು ಜಿಲ್ಲೆ
18.	ಹಾಸನ ಜಿಲ್ಲೆ	27.	ರಾಮನಗರ ಜಿಲ್ಲೆ
19.	ಹಾವೇರಿ ಜಿಲ್ಲೆ	28.	ಶಿವಮೊಗ್ಗ ಜಿಲ್ಲೆ
20.	ಪೊಲೀಸ್ ಅಧೀಕ್ಷಕರು, ಕೆ.ಜಿ.ಎಫ್.	29.	ತುಮಕೂರು ಜಿಲ್ಲೆ
21.	ಕೊಡಗು ಜಿಲ್ಲೆ	30.	ಉತ್ತರ ಕನ್ನಡ ಜಿಲ್ಲೆ, ಕಾರವಾರ
22.	ಕೋಲಾರ ಜಿಲ್ಲೆ	31.	ಉಡುಪಿ ಜಿಲ್ಲೆ
23.	ಕೊಪ್ಪಳ ಜಿಲ್ಲೆ	32.	ಯಾದಗಿರಿ ಜಿಲ್ಲೆ
		33.	ಅಶ್ವಾರೋಹಿದಳ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್

ಡಿ) ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಅಶ್ವಾರೋಹಿದಳ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಆಯ್ಕೆ ಬಯಸಿ ಅರ್ಜಿಯನ್ನು ಸಲ್ಲಿಸುವ ಅಭ್ಯರ್ಥಿಗಳು ಯಾವ ಜಿಲ್ಲೆ / ಕಮೀಷನರೇಟ್ ಮತ್ತು ಘಟಕಗಳಲ್ಲಿ ಅರ್ಜಿಯನ್ನು ಪಡೆಯುವರೋ ಅದೇ ಜಿಲ್ಲೆ / ಕಮೀಷನರೇಟ್ ಮತ್ತು ಘಟಕಗಳಲ್ಲಿ ಅರ್ಜಿಯನ್ನು ಜಾಗರೂಕತೆಯಿಂದ ಭರ್ತಿ ಮಾಡಿ ಸಲ್ಲಿಸತಕ್ಕದ್ದು. ಒಂದು ಜಿಲ್ಲೆ / ಕಮೀಷನರೇಟ್ ಮತ್ತು ಘಟಕಗಳಲ್ಲಿ ಪಡೆದ ಅರ್ಜಿಯಲ್ಲಿ ಪ್ರತ್ಯೇಕ ಕೋಡ್ ಇರುವುದರಿಂದ ಮತ್ತೊಂದು ಜಿಲ್ಲೆ / ಕಮೀಷನರೇಟ್ ಮತ್ತು ಘಟಕಗಳಲ್ಲಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳದೆ ತಿರಸ್ಕರಿಸಲಾಗುವುದು. ಇದಕ್ಕೆ ಸಂಬಂಧಿಸಿದಂತೆ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

<u>ಸೂಚನೆ:</u> ಆನ್‌ಲೈನ್ ಅರ್ಜಿ ಅಥವಾ ಮೇಲ್ಕಾಣಿಸಿದ ಪೊಲೀಸ್ ಸೂಪರಿಂಟೆಂಡೆಂಟ್/ ಪೊಲೀಸ್ ಕಮೀಷನರ್ / ಘಟಕ ಕಛೇರಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿ ಖರೀದಿಸಿದ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು. ಜೆರಾಕ್ಸ್ ಮಾಡಿದ ಇಲ್ಲವೇ ಖಾಸಗಿ ವ್ಯಕ್ತಿಗಳಿಂದ ಕೊಂಡಂತಹ ಅರ್ಜಿಗಳು ಸ್ವೀಕೃತಿಗೆ ಅನರ್ಹವಾಗುತ್ತದೆ. ಕೊರಿಯರ್ / ಪೋಸ್ಟ್ ಮುಖಾಂತರ ಕಳುಹಿಸಲಾಗುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಆನ್‌ಲೈನ್ ಮುಖಾಂತರ ಭರ್ತಿ ಮಾಡಿದ ಹಾಗೂ ಖುದ್ದಾಗಿ ಮೇಲೆ ನಮೂದಿಸಿರುವ ಕಛೇರಿಯ ಕೌಂಟರ್‌ನಲ್ಲಿ ನೀಡುವ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು.

ಇ) ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.

ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್	–	3068 ಹುದ್ದೆಗಳು
ಅಶ್ವಾರೋಹಿದಳ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್	–	23 ಹುದ್ದೆಗಳು
ಒಟ್ಟು	–	3091 ಹುದ್ದೆಗಳು

(ಜಿಲ್ಲೆ / ಕಮೀಷನರೇಟ್ ಮತ್ತು ಘಟಕಗಳಲ್ಲಿರುವ ಖಾಲಿ ಹುದ್ದೆಗಳ ವರ್ಗೀಕರಣಕ್ಕೆ ಅನುಬಂಧ–'ಎ' ಅನ್ನು ನೋಡಿ)

2. <u>ಅರ್ಹತೆಗಳು:</u>

(ಎ) **<u>ಅರ್ಹತಾ ಷರತ್ತುಗಳು</u>** :

i) ಭಾರತೀಯ ನಾಗರೀಕನಾಗಿರತಕ್ಕದ್ದು.

ii) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

iii) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

(ಬಿ) **<u>ವಯೋಮಿತಿ:</u>**

i) **ಸಾಮಾನ್ಯ ಅಭ್ಯರ್ಥಿಗಳಿಗೆ:**

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 05.05.2011ಕ್ಕೆ ಅಭ್ಯರ್ಥಿಗೆ ಕನಿಷ್ಠ 18 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 27 ವರ್ಷಗಳು.

ಆ) ಇತರೆ ಅಭ್ಯರ್ಥಿಗಳಿಗೆ 25 ವರ್ಷಗಳು.

ii) **ಮಾಜಿ ಸೈನಿಕ ಅಭ್ಯರ್ಥಿಗಳಿಗೆ:**

ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ" ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಗಳನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

iii) **ಮಾಜಿ ಸೈನಿಕರ ಬಗ್ಗೆ ವಿವರಣೆ:**

ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಅಯೋಧನಾಗಿ) ಸೇವೆ ಸಲ್ಲಿಸಿದ ವ್ಯಕ್ತಿ, ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್ (Defence Security Corps), ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್ (General Reserved Engineering Force), ಲೋಕ್ ಸಹಾಯಕ್ ಸೇನಾ (Lok Sahayak Sena) ಮತ್ತು ಪ್ಯಾರಾ ಮಿಲಿಟರಿ ದಳ (Para Military Forces) ದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು

(ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು.

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

೧. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

೨. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

೩. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ವಿವರಣೆ: ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

iv) ಭಾರತ ಸರ್ಕಾರದ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ.36034/27/84–ಸಿಬ್ಬಂದಿ (ಎಸ್‌ಸಿಟಿ), ದಿನಾಂಕ 02.05.1985 ರನ್ವಯ ಮಾಜಿ ಸೈನಿಕರು ಅವರಿಗೆ ನೀಡಿರುವ ಪ್ರಯೋಜನವಾದ ಪುನರ್ ನೇಮಕವನ್ನು ಉಪಯೋಗಿಸಿಕೊಂಡು ಒಂದು ಬಾರಿ ಸರ್ಕಾರಿ ಹುದ್ದೆಗೆ ಆಯ್ಕೆಯಾದಲ್ಲಿ ಅಂತಹ ಮಾಜಿ ಸೈನಿಕರ ಸ್ಥಾನವು ಸರ್ಕಾರಿ ಉದ್ಯೋಗದ ಪುನರ್ ನೇಮಕಕ್ಕೆ ರದ್ದಾಗುತ್ತದೆ. ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ.ಒಇ/90/ಪೊಸಿಅ/2005, ದಿನಾಂಕ 02.02.2006ರ ಪತ್ರದಲ್ಲಿ ದಿನಾಂಕ 02.05.1985ರ ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿನ ಮಾರ್ಗಸೂಚಿಯನ್ವಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ. ಈ ವಿಷಯದ ಕುರಿತು ವೃಂದ ಮತ್ತು ನೇಮಕಾತಿ ನಿಯಮವಾದ ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ಸೇವೆಗಳು ಸೇರಿದಂತೆ (ನೇಮಕಾತಿ) (ತಿದ್ದುಪಿಡಿ) ನಿಯಮ, 2009 ರಲ್ಲಿಯೂ ಸಹ ನಿಗಧಿಪಡಿಸಲಾಗಿದೆ. **(ಈ ಕಾರಣದಿಂದ ಮಾಜಿ ಸೈನಿಕರು ಕಡ್ಡಾಯವಾಗಿ ಅರ್ಜಿಯ (OMR) ಕಾಲಂ 8ಎ ಯನ್ನು ಭರ್ತಿ ಮಾಡತಕ್ಕದ್ದು. ಕಾಲಂ 8ಬಿ ಮಾಜಿ ಸೈನಿಕರು ಭೂದಳ/ನೌಕಾದಳ/ವಾಯು ದಳದಲ್ಲಿ ಸೇವೆ ಸಲ್ಲಿಸಿದಷ್ಟು ಅವಧಿಯನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು)**

v) ಈ ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕದ ನಂತರ ಯಾವೊಬ್ಬ ಮಾಜಿ ಸೈನಿಕ ಅಭ್ಯರ್ಥಿಯು ಸರ್ಕಾರಿ ನೌಕರಿಯೊಂದಕ್ಕೆ ಮಾಜಿ ಸೈನಿಕ ಮೀಸಲಾತಿ ಪಡೆದು ಸೇರಿದರೆ, ಅಂತಹ ಮಾಜಿ ಸೈನಿಕ ತಾನು ನೌಕರಿ ಸೇರಿದ ಬಗ್ಗೆ ಯಾವ ಜಿಲ್ಲೆ / ಕಮೀಷನರೇಟ್ / ಘಟಕಕ್ಕೆ ಅರ್ಜಿ ಸಲ್ಲಿಸುವರೋ ಸದರಿ ಪೊಲೀಸ್ ಸೂಪರಿಂಟೆಂಡೆಂಟ್/ ಪೊಲೀಸ್ ಕಮೀಷನರ್ ಕಛೇರಿಗೆ ಮಾಹಿತಿ ನೀಡತಕ್ಕದ್ದು. ಇಂತಹ ಅಭ್ಯರ್ಥಿಯು ಮಾಜಿ ಸೈನಿಕ ಮೀಸಲಾತಿಗೆ ಅನರ್ಹನಾಗುತ್ತಾನೆ.

vi) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮ 9(1) ರನ್ವಯ ಕೇಂದ್ರ ಸಶಸ್ತ್ರದಳದಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. (**ಓ.ಎಂ.ಆರ್ ಅರ್ಜಿಯ ಕಾಲಂ 8ಸಿ ಯನ್ನು ಭರ್ತಿ ಮಾಡತಕ್ಕದ್ದು**). ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. (ಈ ನೇಮಕಾತಿಗೆ ಕೇವಲ ಪುರುಷ ಅಭ್ಯರ್ಥಿಗಳು ಮಾತ್ರ ಅರ್ಹರಾಗಿರುವುದರಿಂದ ಗಂಡು ಮಕ್ಕಳು ಮಾತ್ರ ಅರ್ಜಿ ಸಲ್ಲಿಸುವಂತೆ ತಿಳಿಸಲಾಗಿದೆ). ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಟಿಪ್ಪಣಿ: ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೇ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.

3. ವಿದ್ಯಾರ್ಹತೆ:

ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಅಶ್ವಾರೋಹಿದಳ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ಸಂಬಂಧಿಸಿದಂತೆ : ಎಸ್.ಎಸ್.ಎಲ್.ಸಿ. / 10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 05.05.2011 ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ 05.05.2011 ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

ಟಿಪ್ಪಣಿ:

i) ಮೇಲೆ ನಮೂದಿಸಿದಂತೆ ವಿದ್ಯಾರ್ಹತೆಯನ್ನು / ಶೇಕಡ ಅಂಕಗಳನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದರೂ ನಂತರ ನೇಮಕಾತಿ ಸಮಿತಿಗೆ ವಿದ್ಯಾರ್ಹತೆ / ಶೇಕಡ ಅಂಕಗಳನ್ನು ಹೊಂದಿರುವುದಿಲ್ಲವೆಂದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದು ಪಡಿಸಲಾಗುವುದು.

ii) ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ನಿಗಧಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತು ಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ. ಕೊನೆಯ ದಿನಾಂಕಕ್ಕೆ ಎಲ್ಲಾ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ./10ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಹೊಂದಿರಬೇಕು.

4. ತರಬೇತಿ, ಖಾಯಂಪೂರ್ವ ಅವಧಿ ಮತ್ತು ವೇತನ ಶ್ರೇಣಿ :

ಎ) ತರಬೇತಿ:

ನೇಮಕಾತಿ ಹೊಂದಿದ ಅಭ್ಯರ್ಥಿಗಳು ಡಿಜಿ ಮತ್ತು ಐಜಿಪಿ ರವರು ಕಾಲ ಕಾಲಕ್ಕೆ ನಿರ್ದಿಷ್ಟ ಪಡಿಸಿದ ಪೊಲೀಸ್ ತರಬೇತಿಯನ್ನು ಪೊಲೀಸ್ ತರಬೇತಿ ಶಾಲೆಗಳಲ್ಲಿ 9 ತಿಂಗಳು ಮೂಲ ತರಬೇತಿಯನ್ನು ಪಡೆಯಬೇಕು. ತರಬೇತಿಯಲ್ಲಿ ನಿಗಧಿಪಡಿಸಿದ ಪರೀಕ್ಷೆಗಳಲ್ಲಿ ಪ್ರಶಿಕ್ಷಣಾರ್ಥಿಯು ಉತ್ತೀರ್ಣರಾಗಬೇಕು. ಅನುತ್ತೀರ್ಣರಾದ ಪ್ರಶಿಕ್ಷಣಾರ್ಥಿಯನ್ನು ಸೇವೆಯಿಂದ ವಜಾಗೊಳಿಸಲಾಗುವುದು.

ಬಿ) ಖಾಯಂಪೂರ್ವ ಅವಧಿ:

ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಾನುಸಾರ ಎರಡು ವರ್ಷ ಆರು ತಿಂಗಳು ಖಾಯಂ ಪೂರ್ವ ಅವಧಿಯಲ್ಲಿರುತ್ತಾರೆ.

ಸಿ) **ವೇತನ ಶ್ರೇಣಿ:**

ರೂ. 5800–100–6000–125–6500–150–7100–175–7800–200–8600–225–9500–250–10500

5. ಸಹಿಷ್ಣುತೆ ಪರೀಕ್ಷೆ (Endurance Test) ಮತ್ತು ದೇಹದಾರ್ಢ್ಯತೆ ಪರೀಕ್ಷೆ :

ಎ) ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಸಂಬಂಧಪಟ್ಟ ಪೊಲೀಸ್ ಸೂಪರಿಂಟೆಂಡೆಂಟ್/ ಪೊಲೀಸ್ ಕಮೀಷನರ್ / ಮೌಂಟೆಡ್ ಕಂಪನಿ ಕಛೇರಿಯು ನಿಗದಿಪಡಿಸಿದ ಸ್ಥಳದಲ್ಲಿ ನಡೆಸಲಾಗುವುದು. **ಮೇ ಅಥವಾ ಜೂನ್ ತಿಂಗಳಲ್ಲಿ** ಈ ಪರೀಕ್ಷೆಗಳನ್ನು ನಡೆಸಲು ಉದ್ದೇಶಿಸಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಕಳುಹಿಸುವ ಕರೆಪತ್ರದಲ್ಲಿ ಮಾಹಿತಿಯನ್ನು ತಿಳಿಸಲಾಗುವುದು.

ಬಿ) **ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಸಂಬಂಧಪಟ್ಟ ಪೊಲೀಸ್ ಸೂಪರಿಂಟೆಂಡೆಂಟ್/ ಪೊಲೀಸ್ ಕಮೀಷನರ್ / ಮೌಂಟೆಡ್ ಕಂಪನಿ ಕಛೇರಿಯು ನಿಗದಿಪಡಿಸಿದ ಕೇಂದ್ರಗಳಲ್ಲಿ ನಡೆಸಲಾಗುವುದು.**

ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ ಇದನ್ನು ಕರೆಪತ್ರದಲ್ಲಿ ತಿಳಿಸಲಾಗುವುದು. ಎಲ್ಲಿ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ನಡೆಸಿದರೂ ಅಭ್ಯರ್ಥಿಗಳು ಸದರಿ ಪರೀಕ್ಷೆಗೆ ಹಾಜರಾಗತಕ್ಕದ್ದು, ಇಲ್ಲದಿದ್ದಲ್ಲಿ ಗೈರುಹಾಜರು/ಅನರ್ಹಗೊಳಿಸಲಾಗುವುದು.

ಸಿ) **ಆನ್‌ಲೈನ್ ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದರೆ ದೈಹಿಕ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಈ ಸಂಬಂಧ ಆನ್‌ಲೈನ್ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.inನ್ನು ದಿನನಿತ್ಯ ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಖುದ್ದಾಗಿ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳಿಗೆ ಕರೆಪತ್ರವನ್ನು ಅಂಚೆ ಮುಖಾಂತರ ಕಳುಹಿಸಲಾಗುವುದು. ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದಿಲ್ಲ.

ನೇರವಾಗಿ ಅರ್ಜಿಗಳನ್ನು ಸಲ್ಲಿಸುವ ಹಾಗೂ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು ಮತ್ತು ಅದರ ಒಂದು ದೃಢೀಕೃತ ಪ್ರತಿಯನ್ನು ನೀಡುವುದು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪ್ಯಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

ಡಿ) ಕರೆಪತ್ರದ ಜೊತೆಗೆ ಖುದ್ದಾಗಿ ಸಲ್ಲಿಸುವ ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರವನ್ನು ಹಾಗೂ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

ಇ) **ಸಹಿಷ್ಣುತೆ ಪರೀಕ್ಷೆ : (Endurance Test)**

i) ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹರಾಗಲು ಅಭ್ಯರ್ಥಿಗಳು ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು ಹಾಗೂ ಈ ಕೆಳಗಿನ ಎಲ್ಲಾ ಸಹಿಷ್ಣುತೆ ಪರೀಕ್ಷೆಗಳನ್ನು ಈ ಕೆಳಗೆ ನಮೂದಿಸಿರುವ ಕ್ರಮದಲ್ಲಿಯೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಗಳಲ್ಲಿ ಭಾಗವಹಿಸುವುದನ್ನು ತಿರಸ್ಕರಿಸುವವರು/ ವಿಫಲವಾಗುವವರು ಅನರ್ಹತೆಗೆ ಒಳಗಾಗುವರು. ಪ್ರತಿಯೊಂದು ಸಹಿಷ್ಣುತೆ

ಪರೀಕ್ಷೆ ಮುಗಿದ ನಂತರ ನಿಗದಿತ ನಮೂನೆಗೆ ಅಭ್ಯರ್ಥಿಯು ಭರ್ತಿ ಮಾಡಿರುವ ವಿವರಗಳನ್ನು ಪರಿಶೀಲಿಸಿ ಸಹಿ ಹಾಕಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಯು ಅನರ್ಹತೆಗೊಳಗಾಗುವನು. ಸಹಿಷ್ಣುತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

iii) **ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಅಶ್ವಾರೋಹಿದಳ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಸಹಿಷ್ಣುತೆ ಪರೀಕ್ಷೆ ಈ ಕೆಳಕಂಡಂತಿರುತ್ತದೆ:**

ಸಹಿಷ್ಣುತೆ ಪರೀಕ್ಷೆ		
	ಅಂಶಗಳು	**ಅರ್ಹತಾ ವೇಳೆ / ದೂರ**
ಎಲ್ಲಾ ಸಾಮಾನ್ಯ ಅಭ್ಯರ್ಥಿಗಳಿಗೆ	1600 ಮೀಟರ್ ಓಟ	6 ನಿಮಿಷ
	ಎತ್ತರ ಜಿಗಿತ ಅಥವಾ ಉದ್ದ ಜಿಗಿತ	1.20 ಮೀಟರ್‌ಗಿಂತ ಕಡಿಮೆ ಇಲ್ಲದಂತೆ ಅಥವಾ 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ (3 ಅವಕಾಶಗಳು ಮಾತ್ರ)
	ಗುಂಡು ಎಸೆತ (7.26 ಕೆ.ಜಿ.)	5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ (3 ಅವಕಾಶಗಳು ಮಾತ್ರ)
ಮಾಜಿ ಸೈನಿಕ ಅಭ್ಯರ್ಥಿಗಳಿಗೆ	400 ಮೀಟರ್ ಓಟ	2 ನಿಮಿಷಕ್ಕಿಂತ ಮೀರದಂತೆ
	ಎತ್ತರ ಜಿಗಿತ ಅಥವಾ ಉದ್ದ ಜಿಗಿತ	0.90 ಮೀಟರ್‌ಗಿಂತ ಕಡಿಮೆ ಇಲ್ಲದಂತೆ ಅಥವಾ 2.50 ಮೀಟರ್‌ಗಿಂತ ಕಡಿಮೆ ಇಲ್ಲದಂತೆ (3 ಅವಕಾಶಗಳು ಮಾತ್ರ)
	ಗುಂಡು ಎಸೆತ (4 ಕೆ.ಜಿ.)	3.75 ಮೀಟರ್‌ಗಿಂತ ಕಡಿಮೆ ಇಲ್ಲದಂತೆ (3 ಅವಕಾಶಗಳು ಮಾತ್ರ)

ದೇಹದಾರ್ಢ್ಯತೆ ಪರೀಕ್ಷೆ **(ಸಹಿಷ್ಣುತೆ ಪರೀಕ್ಷೆಯಲ್ಲಿ ಅರ್ಹಗೊಂಡ ಅಭ್ಯರ್ಥಿಗಳಿಗೆ ಮಾತ್ರ)**	
ಎಲ್ಲಾ ಸಾಮಾನ್ಯ ಮತ್ತು * ಮಾಜಿ ಸೈನಿಕ ಅಭ್ಯರ್ಥಿಗಳಿಗೆ	***ಕನಿಷ್ಠ ಎತ್ತರ*** : 168 ಸೆಂ. ಮೀ. ***ಕನಿಷ್ಠ ಎದೆ ಸುತ್ತಳತೆ*** : 86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ) ಕನಿಷ್ಟ ವಿಸ್ತರಣೆ 5 ಸೆಂ. ಮೀ.

ವಿಶೇಷ ಸೂಚನೆ :-

ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಸಹಿಷ್ಣುತೆ ಪರೀಕ್ಷೆಯ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತ ದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು.

ಟಿಪ್ಪಣಿ :

i) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ಇತರೆ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

ii) ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iii) ಅಭ್ಯರ್ಥಿಗಳು ಸಹಿಷ್ಣುತೆ ಪರೀಕ್ಷೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹಗೊಳ್ಳುವರು.

iv) * ನಿಗಧಿಪಡಿಸಿರುವ ಕನಿಷ್ಠ ಎತ್ತರ 168 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು.

v) ಸಹಿಷ್ಣುತೆ ಪರೀಕ್ಷೆಯನ್ನು ಪಾರದರ್ಶಕವಾಗಿ ಹಾಗೂ ನಿಖರತೆಯಾಗಿ ಮಾಡಲು RFID (Radio Frequency Identification) Timing Technology ಯನ್ನು ಉಪಯೋಗಿಸಲಾಗುವುದು.

vi) ದೇಹದಾರ್ಢ್ಯತೆ ಪರೀಕ್ಷೆಯ ಎತ್ತರ ಹಾಗೂ ತೂಕವನ್ನು Height-Weight measuring machines ಯಂತ್ರದಿಂದ ಪಡೆಯಲಾಗುವುದು.

vii) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ವೀಡಿಯೋಗ್ರಾಫಿ ಮಾಡಲಾಗುವುದು.

6. ಲಿಖಿತ ಪರೀಕ್ಷೆ:

ಎ) **ಅಭ್ಯರ್ಥಿಯು ಸಹಿಷ್ಣುತೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ ಮಾತ್ರ ಲಿಖಿತ ಪರೀಕ್ಷೆಗೆ ಕರೆಯಲಾಗುವುದು**. ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ಸಂಬಂಧಪಟ್ಟ ಜಿಲ್ಲೆ ಮತ್ತು ನಗರಗಳನ್ನೊಳಗೊಂಡಂತೆ ಪೊಲೀಸ್ ಸೂಪರಿಂಟೆಂಡೆಂಟ್/ ಪೊಲೀಸ್ ಕಮೀಷನರ್ ರವರು ಸೂಚಿಸಲಾಗುವ ಕೇಂದ್ರದಲ್ಲಿ ನಡೆಸಲಾಗುವುದು ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ.

ಬಿ) ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಅಶ್ವಾರೋಹಿದಳ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಅಂದಾಜು **ಜುಲೈ ತಿಂಗಳ ಮೂರನೇ ಭಾನುವಾರ ಅಥವಾ ನಂತರದ ಭಾನುವಾರದಲ್ಲಿ** ಈ ಪರೀಕ್ಷೆಯನ್ನು ನಡೆಸಲು ಉದ್ದೇಶಿಸಲಾಗಿದೆ.

ಸಿ) **ಆನ್‌ಲೈನ್ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದರೆ ಲಿಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಈ ಸಂಬಂಧ ಆನ್‌ಲೈನ್ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನ್ನು ದಿನನಿತ್ಯ ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಖುದ್ದಾಗಿ ಅರ್ಜಿಗಳನ್ನು ಸಲ್ಲಿಸುವ ಅಭ್ಯರ್ಥಿಗಳಿಗೆ ಕರೆಪತ್ರವನ್ನು ಅಂಚೆ ಮುಖಾಂತರ ಕಳುಹಿಸಲಾಗುವುದು. ಲಿಖಿತ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ಲಿಖಿತ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು ಮತ್ತು ಒಂದು ದೃಢೀಕೃತ ಪ್ರತಿಯನ್ನು ನೀಡುವುದು.

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪ್ಯಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Community Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).

ಇ) ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲೆಗಳು i) ಲಿಖಿತ ಪರೀಕ್ಷೆಯ ಕರೆಪತ್ರ, ii) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಖುದ್ದಾಗಿ ಸಲ್ಲಿಸುವ ಓ.ಎಂ.ಆರ್. ಅರ್ಜಿ ಸ್ವೀಕೃತಿ ಪತ್ರ, ಅಥವಾ ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು. ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಎಫ್) ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಮತ್ತು ಅಶ್ವಾರೋಹಿದಳ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ಸಂಬಂಧಿಸಿದಂತೆ ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ 100 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ (Multiple choice)

ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಸಾಮಾನ್ಯ ಜ್ಞಾನ, ವಿಜ್ಞಾನ, ಭೂಗೋಳ, ಇತಿಹಾಸ, ಭಾರತದ ಸಂವಿಧಾನ, ಭಾರತದ ಸ್ವಾತಂತ್ರ್ಯ ಸಂಗ್ರಾಮ, ಸಾಮಾನ್ಯ ಮಾನಸಿಕ ಸಾಮರ್ಥ್ಯ ಮತ್ತು ನೀತಿ ಶಿಕ್ಷಣ ಇತ್ಯಾದಿಗಳ ಬಗ್ಗೆ ಪ್ರಶ್ನೆಗಳು ಇರುತ್ತದೆ. ಪ್ರತಿ ಸರಿ ಉತ್ತರಕ್ಕೆ 1.00 ಅಂಕಗಳನ್ನು ನೀಡಲಾಗುವುದು ಮತ್ತು ತಪ್ಪು ಉತ್ತರಕ್ಕೆ 0.25 ಅಂಕಗಳನ್ನು ಕಳೆಯಲಾಗುವುದು. ಪರೀಕ್ಷೆಯ ಅವಧಿಯು ಒಂದೂವರೆ ಗಂಟೆಯದ್ದಾಗಿರುತ್ತದೆ.

ಜಿ) ಅಭ್ಯರ್ಥಿಗಳು ಈ ವಸ್ತುನಿಷ್ಠ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಮತ್ತು ಅವರು ಅರ್ಹತಾ (Qualifying) ಪರೀಕ್ಷೆಯಲ್ಲಿ ಪಡೆದ ಶೇಕಡಾ ಅಂಕಗಳನ್ನೂ ಕೂಡಿಸಿ ಅದರ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿ ಇರುವ ಹುದ್ದೆಗಳಿಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು 1:1 ರ ಪ್ರಮಾಣದಲ್ಲಿ ಪ್ರಕಟಿಸಲಾಗುವುದು. ನಂತರ ಮೂಲ ದಾಖಲೆಗಳ ಪರಿಶೀಲನೆ ಮಾಡಿ ವೈದ್ಯಕೀಯ ಪರೀಕ್ಷೆಗೆ ಕರೆಯಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಯ ಸಂದರ್ಭದಲ್ಲಿ ಗೆಜೆಟೆಡ್ ಅಧಿಕಾರಿಯವರಿಂದ ದೃಢೀಕೃತ ಜೆರಾಕ್ಸ್ ಪ್ರತಿಯ ಒಂದು ಸೆಟ್‌ಅನ್ನು ಸಂಬಂಧಪಟ್ಟ ಕಛೇರಿಗೆ ನೀಡುವುದು.

ಹೆಚ್) **ಸೂಚನೆ:**

i) ಅ) ಪ್ರಶ್ನೆ ಪತ್ರಿಕೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಅಭ್ಯರ್ಥಿಯು ಸರಿಯಾದ ಉತ್ತರವನ್ನು ಗುರುತಿಸಬೇಕು.

ಆ) ಪ್ರಶ್ನೆ ಪತ್ರಿಕೆಯಲ್ಲಿನ ಪ್ರಶ್ನೆಗಳಿಗೆ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ **ಕಪ್ಪು** ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ನಿಗದಿತ ಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ) ಹಾಗೂ ಅಭ್ಯರ್ಥಿಯು ಅರ್ಜಿ ಸಂಖ್ಯೆ. ರೋಲ್ ನಂಬರ್ ಮತ್ತು ಸಹಿಯನ್ನು ತಪ್ಪದೇ ಮಾಡಬೇಕು. ಇದನ್ನು ತುಂಬದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆಯಿಂದ ಹೊರಹೋಗುತ್ತಾನೆ.

ಇ) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

ii) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

iii) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ, ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

iv) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಮೊಬೈಲ್ ಫೋನುಗಳನ್ನು ಅಭ್ಯರ್ಥಿಗಳು ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

v) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.

vi) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ. ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ನೇಮಕಾತಿ ಸಮಿತಿಗೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ದೋಷ ಕಂಡು ಬಂದಲ್ಲಿ ಅದನ್ನು ತಕ್ಷಣ ಮೇಲ್ವಿಚಾರಕರ ಗಮನಕ್ಕೆ ತಂದು ಅದನ್ನು ಸರಿಪಡಿಸಿಕೊಳ್ಳಬೇಕು. ಪರೀಕ್ಷೆ ಮುಗಿದ ನಂತರ ಅದರ ಬಗ್ಗೆ ನೇಮಕಾತಿ ಸಮಿತಿಯ ಗಮನಕ್ಕೆ ತಂದರೆ ಅಂತಹ ಆಕ್ಷೇಪಣೆಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

7. **ವೈದ್ಯಕೀಯ ಪರೀಕ್ಷೆ :**

ಮೊದಲನೇ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅರ್ಹಗೊಳ್ಳುವ ಎಲ್ಲಾ ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆಗೆ ನೇಮಕಾತಿ ಸಮಿತಿಯು ರಚಿಸುವ ವೈದ್ಯಕೀಯ ಮಂಡಳಿಯ ಮುಂದೆ ಹಾಜರಾಗತಕ್ಕದ್ದು, ಹಾಜರಾಗುವ ವೇಳೆ ಮತ್ತು ಸ್ಥಳವನ್ನು ನೇಮಕಾತಿ ಪ್ರಾಧಿಕಾರವು ನಿಗಧಿಪಡಿಸುವುದು.

ಆಯ್ಕೆಯಾದ ಅಭ್ಯರ್ಥಿಗಳು ಸಂಬಂಧಪಟ್ಟ ಜಿಲ್ಲೆ / ಕಮೀಷನರೇಟ್ ಮತ್ತು ಘಟಕಗಳಲ್ಲಿ ವೈದ್ಯಕೀಯ ಪರೀಕ್ಷೆಗೆ ಹಾಜರಾಗುವಾಗ ಮೂಲ ದಾಖಲೆಗಳೊಂದಿಗೆ ಹಾಜರಾಗುವುದು ಹಾಗು ಪತ್ರಾಂಕಿತ (Gazetted) ಅಧಿಕಾರಿಯವರಿಂದ ಮೂಲ ದಾಖಲೆಗಳ ದೃಢೀಕೃತ ಜೆರಾಕ್ಸ್ ಪ್ರತಿಯ ಒಂದು ಸೆಟ್‌ಅನ್ನು ಸಂಬಂಧಪಟ್ಟ ಕಛೇರಿಗೆ ನೀಡುವುದು.

ವೈದ್ಯಕೀಯ ಪರೀಕ್ಷೆಗಳು ಈ ಕೆಳಕಂಡಂತಿರುತ್ತವೆ :

(ಎ) **<u>ದೃಷ್ಟಿ:</u>**

ಕನ್ನಡಕ ಸಹಿತ ಅಥವಾ ಕನ್ನಡಕವಿಲ್ಲದೇ ಕೆಳಗೆ ಕಾಣಿಸಿದ ದರ್ಜೆಯ ಸಮೀಪ ಮತ್ತು ದೂರದ ದೃಷ್ಟಿ ಹೊಂದಿರಬೇಕು.

	ಉತ್ತಮ		ಕನಿಷ್ಠ
(i) ದೂರದ ದೃಷ್ಟಿ	6/9	ಅಥವಾ	6/9
	6/9		6/12
(ii) ಸಮೀಪದ ದೃಷ್ಟಿ	0/6		0/8

ಪ್ರತಿ ಕಣ್ಣು ಸಂಪೂರ್ಣ ಕ್ಷೇತ್ರ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆಯೆಂದು ಪರಿಗಣಿಸಲಾಗುವುದು.

(ಬಿ) **<u>ಶ್ರವಣ ಶಕ್ತಿ:</u>**

i) ರಿನ್ನೇಸ್ ಪರೀಕ್ಷೆ (Rinne's Test) ii) ವೆಬ್ಬರ್ ಪರೀಕ್ಷೆ (Weber's Test)

iii) ವೆರ್ಟಿಗೋ ಪರೀಕ್ಷೆ (Tests for Vertigo)

ಮೇಲಿನ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಕಂಡು ಬಂದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

(ಸಿ) ಅಪಧಮನಿ ಊತ ಸಹ ಅನರ್ಹತೆ (Varicose Veins)

(ಡಿ) ಮಾತಿನಲ್ಲಿ ಅಡಚಣೆ ಸಹ ಅನರ್ಹತೆ (Impediment in speech)

(ಇ) ಎದೆಯ ಕ್ಷ-ಕಿರಣ (Chest X-Ray) ವನ್ನು ಪರೀಕ್ಷೆಗೆ ತೆಗೆದುಕೊಳ್ಳಲಾಗುವುದು.

ಮೇಲಿನ ಎಲ್ಲಾ ಪರೀಕ್ಷೆಗಳನ್ನು ವೈದ್ಯಕೀಯ ಮಂಡಳಿಯು ನಡೆಸುತ್ತದೆ. ದೈಹಿಕವಾಗಿ ಅರ್ಹರೆಂದು ಪ್ರಮಾಣೀಕರಿಸಿದ ಅಭ್ಯರ್ಥಿಗಳು ಮಾತ್ರ ನೇಮಕಾತಿಗೆ ಅರ್ಹಗೊಳ್ಳುವರು.

<u>ಟಿಪ್ಪಣಿ</u> : ಸಹಿಷ್ಣುತೆ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

8. <u>ಜಾತಿ ಮೀಸಲಾತಿ ಪ್ರಮಾಣ ಪತ್ರಗಳು</u> :

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ–ಡಿ ಪ್ರಮಾಣ ಪತ್ರ.

ಬಿ) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ–ಇ ಪ್ರಮಾಣ ಪತ್ರ.

ಸಿ) ಪ್ರವರ್ಗ– 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ – ಎಫ್ ಪ್ರಮಾಣ ಪತ್ರ.

<u>ಸೂಚನೆ</u> : ನಮೂನೆ – ಎಫ್ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ: 05.05.2011 ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

9. <u>ಗ್ರಾಮೀಣ ಮೀಸಲಾತಿ:</u>

ಎ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು, **ಮತ್ತು**

ಬಿ) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು **ವ್ಯಾಸಂಗ ಮಾಡಿದ ಅವಧಿಯಲ್ಲಿ** ಅಂದಿನ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು, **ಮತ್ತು**

ಸಿ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ. ಸಿಆಸುಇ:08:ಸೇನೆನಿ:2001, ದಿನಾಂಕ 13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ/96/ಸೇನೆನಿ/2005, ದಿನಾಂಕ 10.08.2005ರಲ್ಲಿ ನಿಗಧಿಪಡಿಸಿದ ನಮೂನೆ–2ರ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆಯುವುದು. ನಮೂನೆ–1 (ನಾನ್–ಕ್ರೀಮಿ ಲೇಯರ್) ಮತ್ತು ನಮೂನೆ–2 ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ).

ಡಿ) ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳು ನಮೂನೆ–2ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

ಸೂಚನೆ: ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು Non-Creamy Layer ಪ್ರಮಾಣ ಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

10. ಯೋಜನಾ ನಿರಾಶ್ರಿತರು:

ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ. ಡಿಪಿಎಆರ್:23:ಎಸ್ಆರ್ಆರ್:99, ದಿನಾಂಕ 23.11.2000 ರನ್ವಯ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಸರ್ಕಾರದ ಸುತ್ತೋಲೆ ಸಂಖ್ಯೆ. ಸಿಆಸುಇ:44: ಸೇನೆನಿ:2001, ದಿನಾಂಕ 27.07.2001ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಸೂಚನೆ: 1) ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.

2) ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದ ನಂತರ ಮಾಡಿಸುವ ಮೀಸಲಾತಿ ಪ್ರಮಾಣ ಪತ್ರಗಳನ್ನು ಯಾವುದೇ ಹಂತದಲ್ಲಿ ಗಣನೆಗೆ ತೆಗೆದುಕೊಳ್ಳುವುದಿಲ್ಲ.

3) ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

11. ಕನ್ನಡ ಮಾಧ್ಯಮ:

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಅಭ್ಯರ್ಥಿಗಳು ಆನ್‌ಲೈನ್ ಮತ್ತು ಖುದ್ದಾಗಿ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ. ಆದರೆ ಈ ಮೇಲಿನ ಪ್ರಮಾಣ ಪತ್ರಗಳನ್ನು/ದಾಖಲೆಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ, ದಿನಾಂಕ: 05.05.2011ರ ಒಳಗೆ ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು, ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.

ಸೂಚನೆ: 1) ಕಡ್ಡಾಯವಾಗಿ ಹಾಜರು ಪಡಿಸಬೇಕಾದ ವಿದ್ಯಾರ್ಹತೆ/ ಜನ್ಮ ದಿನಾಂಕ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

2) ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ: ಆ ಮೀಸಲಾತಿಯನ್ನು ರದ್ದು ಪಡಿಸಿ ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ, ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

12. ಪ್ರಮುಖವಾದ ಸೂಚನೆಗಳು :

ಎ) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪ್ರಮಾಣ ಪತ್ರ)/ ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ (Extract of Cumulative Record)

ಬಿ) ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯನ್ನು ಭರ್ತಿ ಮಾಡುವಾಗ ಅರ್ಜಿಯ ಎಲ್ಲಾ ಕಾಲಂಗಳನ್ನು **ಕಪ್ಪು** ಬಣ್ಣದ ಬಾಲ್ ಪಾಯಿಂಟ್ ಪೆನ್ನಿನಿಂದ ಮಾತ್ರ ತುಂಬತಕ್ಕದ್ದು. ಅಲ್ಲದೆ, ಮೀಸಲಾತಿಗಳನ್ನು ಕೋರಿದಲ್ಲಿ ಖುದ್ದಾಗಿ ಪಡೆದು ಸಲ್ಲಿಸುವ ಅರ್ಜಿಯಲ್ಲಿ ಮೀಸಲಾತಿಗಾಗಿ ನಿರ್ದಿಷ್ಟಪಡಿಸಿದ ವೃತ್ತಗಳನ್ನು ತುಂಬತಕ್ಕದ್ದು. ಮೀಸಲಾತಿಯ ವೃತ್ತಗಳಲ್ಲಿ ಖಾಲಿ ಬಿಟ್ಟಿರುವ ಅಭ್ಯರ್ಥಿಗಳ ಮೀಸಲಾತಿಯನ್ನು ಸಾಮಾನ್ಯ ಅರ್ಹತೆಯೆಂದು ಪರಿಗಣಿಸಲಾಗುವುದು. ನಿರ್ದಿಷ್ಟವಾದ ವೃತ್ತಗಳಲ್ಲಿ ಮೀಸಲಾತಿಯನ್ನು ನಮೂದಿಸದೆ ಬೇರೆ ಕಡೆ ಗುರುತು (ಶೇಡ್)

ಮಾಡಿದ್ದಲ್ಲಿ ಅಂತಹವುಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ. ಅಭ್ಯರ್ಥಿಯು ಅರ್ಜಿಯಲ್ಲಿ ಭರ್ತಿ ಮಾಡಿದ ಮಾಹಿತಿಯು ಅಂತಿಮವಾಗಿರುತ್ತದೆ. ಆದ್ದರಿಂದ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಜಾಗರೂಕತೆಯಿಂದ ಭರ್ತಿ ಮಾಡುವುದು.

ಸಿ) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಸಂಬಂಧಪಟ್ಟ ಘಟಕಾಧಿಕಾರಿ (ಪೊಲೀಸ್ ಸೂಪರಿಂಟೆಂಡೆಂಟ್/ ಪೊಲೀಸ್ ಕಮೀಷನರ್) ರವರ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

ಡಿ) ಅಭ್ಯರ್ಥಿಗಳು ನೇಮಕಾತಿ ಸಮಿತಿಯೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ಅವರ ಮನವಿ ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

i) ಅರ್ಜಿಯ ನಕಲು ಪ್ರತಿ.

ii) ಖುದ್ದಾಗಿ ಪಡೆದು ಅರ್ಜಿ ಸಲ್ಲಿಸಿದ ಬಗ್ಗೆ ನೇಮಕಾತಿ ಸಮಿತಿಯ ಕಛೇರಿಯವರು ನೀಡಿದ ಅರ್ಜಿ ಸ್ವೀಕೃತಿ ಪತ್ರದ ನಕಲು ಪ್ರತಿ.

ಇ) ಯಾವ ಹಂತದಲ್ಲಿಯೂ ಕೋರಿದ ಘಟಕವನ್ನು ಬದಲಾಯಿಸಲಾಗುವುದಿಲ್ಲ. ಉದಾ: ಒಬ್ಬ ಅಭ್ಯರ್ಥಿಯು ಬೆಂಗಳೂರನ್ನು ಕೋರಿ ಅರ್ಜಿ ಸಲ್ಲಿಸಿ, ಮೈಸೂರಿಗೆ ತನ್ನ ಅಭ್ಯರ್ಥಿತನವನ್ನು ಪರಿಗಣಿಸುವಂತೆ ಕೋರಿದ್ದಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ.

ಎಫ್) ಅಭ್ಯರ್ಥಿಗಳು ON-LINE ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಸಮಿತಿಯು ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ನೀಡುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

ಜಿ) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಪರೀಕ್ಷಾ ಕೇಂದ್ರ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

13. <u>ವಿಶೇಷ ಸೂಚನೆಗಳು</u> :

ಎ) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಓ.ಎಂ.ಆರ್. ಅರ್ಜಿಯ ಒಂದು ಫೋಟೋ (Xerox) ಪ್ರತಿಯನ್ನು ಮತ್ತು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

ಬಿ) ಸರ್ಕಾರಿ ಇಲಾಖೆಯಲ್ಲಿ/ರಾಜ್ಯಸರ್ಕಾರದ/ಕೇಂದ್ರ ಸರ್ಕಾರದ/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ, ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಪೇಕ್ಷಣಾ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿದ್ದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

ಸಿ) **ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಬಾರದೆಂದು ಸಲಹೆ ನೀಡಲಾಗಿದೆ. ಆದರೆ, ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸುವ ಬದಲು ಒಂದೇ ಅರ್ಜಿಯನ್ನು ಪಡೆದು ಅತೀ ಜಾಗರೂಕತೆಯಿಂದ ಮತ್ತು ಬಹಳ ಎಚ್ಚರಿಕೆಯಿಂದ ಭರ್ತಿ ಮಾಡತಕ್ಕದ್ದು, ಏಕೆಂದರೆ ಒಂದಕ್ಕಿಂತ ಹೆಚ್ಚು ನೋಂದಣಿ ಸಂಖ್ಯೆಯಲ್ಲಿ ಪರೀಕ್ಷೆಗೆ ಹಾಜರಾಗಿದ್ದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ಅಂತಹ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಸಂಕ್ಷಿಪ್ತವಾಗಿ ತಿಳಿಸುವುದೆಂದರೆ ಒಬ್ಬ ಅಭ್ಯರ್ಥಿಯು ಒಂದು ನೋಂದಣಿ ಸಂಖ್ಯೆಗಿಂತ ಹೆಚ್ಚು ನೋಂದಣಿ ಸಂಖ್ಯೆಯನ್ನು ಪರೀಕ್ಷೆಯ ಯಾವುದೇ ಹಂತದಲ್ಲಿ ಬಳಸುವುದನ್ನು ನಿಖರವಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಒಂದೇ ಹೆಸರಿನಲ್ಲಿ ಸಲ್ಲಿಸಿ ಬೇರೆ ಬೇರೆ ಫೋಟೋಗಳನ್ನು ಹಚ್ಚಿ, ಸಹಿಗಳನ್ನು ಮಾಡಿ ಪರೀಕ್ಷೆಗೆ ಹಾಜರಾಗಿದ್ದು ಕಂಡುಬಂದಲ್ಲಿ ಅಂತಹವರ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅವರ ಮೇಲೆ ಕಾನೂನಿನ ರೀತ್ಯಾ ಕ್ರಮವನ್ನು ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.**

ಡಿ) ಅರ್ಹ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲೆ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಹಾಗೂ ಇದರಿಂದ ಆಯ್ಕೆಯಾಗಿರುವ ಅಭ್ಯರ್ಥಿಗಳು ತಮ್ಮ ಅಭ್ಯರ್ಥಿತನವನ್ನು ಸಹ ಕಳೆದುಕೊಳ್ಳಬಹುದು. **ಅರ್ಜಿಯೊಂದಿಗೆ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಹಾಗೂ ಪ್ರತಿಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ.** ಒಂದು ವೇಳೆ ಸಲ್ಲಿಸಿ, ಅವು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

ಇ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ 05.05.2011 ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ (ಎಸ್.ಎಸ್.ಎಲ್.ಸಿ./ತತ್ಸಮಾನ) ಯನ್ನು ಹೊಂದಿರಬೇಕು.

ಎಫ್) ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗಧಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅಭ್ಯರ್ಥಿಗಳು ಸ್ವಂತ ಕೈಬರಹದಿಂದ ದುಂಡಗೆ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಎಡಗೈ ಹೆಬ್ಬೆಟಿನ ಗುರುತಿಲ್ಲದ ಮತ್ತು ಸಹಿ ಮಾಡದ ಹಾಗೂ ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಜಿ) ಅರ್ಜಿಯನ್ನು ಯಾವುದೇ ಸಂದರ್ಭದಲ್ಲಿ ಮಡಚಬಾರದು, ಪಿನ್, ಸ್ಟ್ಯಾಪಲ್ ಮತ್ತು ರಂಧ್ರ ಮಾಡಬಾರದು.

ಹೆಚ್) **ಅಭ್ಯರ್ಥಿಗಳು ಓ.ಎಂ.ಆರ್. ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ / ವಿವರಗಳ ಆಧಾರದ ಮೇರೆಗೆ ಅವರ ಅರ್ಹತೆಯನ್ನು ಪರಿಗಣಿಸುವುದರಿಂದ ಮತ್ತು ಅಭ್ಯರ್ಥಿಗಳು ಸಲ್ಲಿಸುವ ಅರ್ಜಿಗಳನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸುವುದರಿಂದ, ಅಭ್ಯರ್ಥಿಗಳು ಅರ್ಜಿಗಳನ್ನು ತುಂಬುವಾಗ ಯಾವುದೇ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.**

ಐ) **ಚಿತ್ತು ಅಥವಾ ಹೊಡೆದುಹಾಕುವುದು ಕೂಡ ಮಾಡಬಾರದು. ಹಾಗೇನಾದರೂ ಚಿತ್ತು ಆದಲ್ಲಿ ಹೊಡೆದು ಹಾಕಿದಲ್ಲಿ ಅಥವಾ ಅರ್ಜಿಯನ್ನು ವಿರೂಪಗೊಳಿಸಿದಲ್ಲಿ ಮತ್ತೊಂದು ಅರ್ಜಿ ಪಡೆದು ತುಂಬಿ ಸಲ್ಲಿಸುವುದು ಅವಶ್ಯಕ. ಖರೀದಿಸಿದ ಓ.ಎಂ.ಆರ್. ಅರ್ಜಿಯನ್ನು ಜೆರಾಕ್ಸ್ ಪ್ರತಿ ಮಾಡಿಸಿ, ಮೊದಲು ಜೆರಾಕ್ಸ್ ಪ್ರತಿಯಲ್ಲಿ ಭರ್ತಿಮಾಡಿ, ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಮೂಲ ಅರ್ಜಿಯನ್ನು ಭರ್ತಿ ಮಾಡುವುದು ಸೂಕ್ತ.**

ಜೆ) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ: 05.05.2011 ಮಾತ್ರ ಅನ್ವಯವಾಗುತ್ತದೆ.

ಕೆ) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

ಎಲ್) ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಸ್ಕ್ಯಾನಿಂಗ್ ಮುಖಾಂತರ ಪರಿಗಣಿಸಿ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ತಯಾರು (Upload) ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೂ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ, ಅಭ್ಯರ್ಥಿಯ ಸಹಿ ಇಲ್ಲದ, ಭಾವಚಿತ್ರ ಇಲ್ಲದೆ ಇರುವ ಮತ್ತು ಹೆಬ್ಬೆಟ್ಟಿನ ಗುರುತಿಲ್ಲದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಎಂ) ಪರೀಕ್ಷೆಗೆ ಪ್ರವೇಶವು ಸಂಪೂರ್ಣವಾಗಿ ತಾತ್ಕಾಲಿಕವಾಗಿರುತ್ತದೆ. ಪ್ರವೇಶ ಪತ್ರ ನೀಡಿದ ಮಾತ್ರಕ್ಕೆ ನೇಮಕಾತಿ ಸಮಿತಿಯು ನಿಮ್ಮ ಅಭ್ಯರ್ಥಿತನವನ್ನು ಅಂಗೀಕರಿಸಿದೆ ಎಂದು ಭಾವಿಸತಕ್ಕದ್ದಲ್ಲ.

ಎನ್) ಪ್ರಶ್ನೆ ಪತ್ರಿಕೆಯಲ್ಲಿ ಯಾವುದಾದರೂ ಮುದ್ರಣ ದೋಷವಾದ್ದಲ್ಲಿ ಅದನ್ನು ತಕ್ಷಣ ಕೊಠಡಿಯ ಪರಿವೀಕ್ಷಕ ರವರ ಗಮನಕ್ಕೆ ತಂದು ಸರಿಯಾದ ಪ್ರಶ್ನೆ ಪತ್ರಿಕೆ ಪಡೆದುಕೊಂಡು ಉತ್ತರವನ್ನು ಬರೆಯಬೇಕು. ಅಲ್ಲದೇ ಇದರ ಬಗ್ಗೆ ಪರೀಕ್ಷೆ ಮುಗಿದ ನಂತರ ನೇಮಕಾತಿ ಸಮಿತಿಗೆ ಸದರಿ ವಿಷಯದ ಬಗ್ಗೆ ತಿಳಿಸಿದ್ದಲ್ಲಿ ಅದನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

